# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 81 |
| ಸದಸ್ಯರ ಹೆಸರು | : | ಶ್ರೀ ಎಂ.ಎ. ಗೋಪಾಲಸ್ವಾಮಿ |
| ಉತ್ತರಿಸುವ ಸಚಿವರು | : | ಸಾರಿಗೆ ಸಚಿವರು |
| ಉತ್ತರಿಸುವ ದಿನಾಂಕ | : | 09-07-2018 |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ | ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ವತಿಯಿಂದ ಗ್ರಾಮೀಣ ಸಾರಿಗೆ ಸೌಲಭ್ಯ ಇಲ್ಲದಿರುವುದರಿಂದ ವಿದ್ಯಾರ್ಥಿಗಳು, ರೈತರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ 2011 ರ ಜನಗಣತಿ ಪ್ರಕಾರ ಒಟ್ಟು 2452 ಗ್ರಾಮಗಳಿದ್ದು, ಎಲ್ಲಾ ಗ್ರಾಮಗಳು ರಾಷ್ಟ್ರೀಕೃತ ವಲಯದಲ್ಲಿರುತ್ತವೆ. ರಾಷ್ಟ್ರೀಕೃತ ವಲಯದಲ್ಲಿರುವ ಎಲ್ಲಾ ಗ್ರಾಮಗಳಿಗೆ ನಿಗಮದ ವತಿಯಿಂದ ಸಾರಿಗೆ ಸೌಲಭ್ಯ ಕಲ್ಪಿಸಲಾಗಿರುತ್ತದೆ.<br><br>ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ತಾಲ್ಲೂಕುಗಳಿಗೆ ನಿಗಮದ ವತಿಯಿಂದ ಈ ಕೆಳಕಂಡಂತೆ ಗ್ರಾಮಾಂತರ ಸಾರಿಗೆ ಸೌಲಭ್ಯ ಒದಗಿಸಲಾಗಿರುತ್ತದೆ. |
| ಆ | ಹಾಗಿದ್ದಲ್ಲಿ, ಅವರುಗಳಿಗೆ ಆಗುತ್ತಿರುವ ತೊಂದರೆಗಳನ್ನು ತಪ್ಪಿಸಲು ಸರ್ಕಾರ ತ್ವರಿತವಾಗಿ ಗ್ರಾಮೀಣ ಸಾರಿಗೆ ಸೌಲಭ್ಯವನ್ನು ಒದಗಿಸಲು ಕ್ರಮ ಕೈಗೊಳ್ಳುವುದೇ; ಹಾಗಿದ್ದಲ್ಲಿ, ಯಾವಾಗ ಕ್ರಮ ಕೈಗೊಳ್ಳಲಾಗುವುದು; | (see table below)<br><br>ಪ್ರಸ್ತುತ ಕಲ್ಪಿಸಲಾಗಿರುವ ಸಾರಿಗೆ ಸೌಲಭ್ಯ ಆ ಭಾಗದ ಸಾರ್ವಜನಿಕ ಪ್ರಯಾಣಿಕರು, ರೈತರು ಹಾಗೂ ವಿದ್ಯಾರ್ಥಿಗಳ ಅವಶ್ಯಕತೆಗೆ ಅನುಗುಣವಾಗಿರುತ್ತವೆ. |
| ಇ | ಶ್ರವಣಬೆಳಗೊಳ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಗ್ರಾಮೀಣ ಸಾರಿಗೆ ಸೌಲಭ್ಯವನ್ನು ಕಲ್ಪಿಸಲು ಸರ್ಕಾರ ಸಮೀಕ್ಷೆ ನಡೆಸಿದೆಯೇ; ಹಾಗಿದ್ದಲ್ಲಿ, ಗ್ರಾಮೀಣ ಸಾರಿಗೆ ಸೌಲಭ್ಯ ಕಲ್ಪಿಸಲು ಸರ್ಕಾರಕ್ಕಿರುವ ತೊಂದರೆಗಳೇನು? | ಶ್ರವಣಬೆಳಗೊಳ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ 375 ಗ್ರಾಮಗಳಿದ್ದು ಎಲ್ಲಾ ಗ್ರಾಮಗಳಿಗೆ ನಿಗಮದ ವತಿಯಿಂದ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ. ಪ್ರಸ್ತುತ ನಿಗಮದ ಹಾಸನ ವಿಭಾಗದ ವತಿಯಿಂದ ಪ್ರತಿ ನಿತ್ಯ ಒಟ್ಟು 56 ಅನುಸೂಚಿಗಳಿಂದ 589 ಸುತ್ತುವಳಿಗಳ ಗ್ರಾಮಾಂತರ ಸಾರಿಗೆ ಸೌಲಭ್ಯ ಕಲ್ಪಿಸಲಾಗಿರುತ್ತದೆ. ಸದರಿ ಸಾರಿಗೆಗಳು ಆ ಭಾಗದ ಸಾರ್ವಜನಿಕ ಪ್ರಯಾಣಿಕರಿಗೆ ಅವಶ್ಯಕತೆಗನುಗುಣವಾಗಿರುತ್ತದೆ. |

| ಕ್ರಸಂ | ತಾಲ್ಲೂಕು | ಒಟ್ಟು ಅನುಸೂಚಿಗಳ ಸಂಖ್ಯೆ | ಒಟ್ಟು ಸುತ್ತುವಳಿಗಳ ಸಂಖ್ಯೆ |
|---|---|---|---|
| 1 | ಹಾಸನ | 86 | 907 |
| 2 | ಆಲೂರು | | |
| 3 | ಅರಕಲಗೂಡು | 39 | 442 |
| 4 | ಹೊಳೆನರಸೀಪುರ | 49 | 493 |
| 5 | ಚನ್ನರಾಯಪಟ್ಟಣ | 56 | 589 |
| 6 | ಬೇಲೂರು | 12 | 118 |
| 7 | ಅರಸೀಕೆರೆ | 64 | 508 |
| 8 | ಸಕಲೇಶಪುರ | 51 | 312 |
| | **ಒಟ್ಟು** | **357** | **3369** |

ಸಂ: ಸಾರಿಇ 75 ಸಾಸಂಪ್ರ 2018

(ಡಿ.ಸಿ. ತಮ್ಮಣ್ಣ)
ಸಾರಿಗೆ ಸಚಿವರು